# Bangalore
# Regional News
# 13.03.2025 / 6.40 p.m.
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹೆಚ್ಚುತ್ತಿರುವ ಸೈಬರ್ ಅಪರಾಧ ಪ್ರಕರಣಗಳ ನಿಗ್ರಹಕ್ಕೆ ಕಠಿಣ ಕ್ರಮ – ಗೃಹ ಸಚಿವ ಡಾ.ಜಿ.ಪರಮೇಶ್ವರ್
2. ಸಾಲದ ಸುಳಿಯಲ್ಲಿ ಸರ್ಕಾರ; ಅಭಿವೃದ್ಧಿ ಕಾರ್ಯ ಸ್ಥಗಿತ – ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ
3. ಅಕ್ರಮ ಚಿನ್ನ ಸಾಗಾಟ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರ ಆರೋಪಿಗಳ ರಕ್ಷಣೆಗೆ ಮುಂದಾಗಿದೆ – ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
4. ದೆಹಲಿಯಲ್ಲಿ ವೇವ್ಸ್ ಶೃಂಗಸಭೆ; 100ಕ್ಕೂ ಹೆಚ್ಚು ರಾಯಭಾರಿಗಳು ಭಾಗಿ

*****************

ದಿನದಿಂದ ದಿನಕ್ಕೆ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುವವರ ವಿರುದ್ಧ ಕಟ್ಟು ನಿಟ್ಟಿನ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಧಾನಪರಿಷತ್ತಿಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ನವೀನ್ ಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕಳೆದ ಒಂದು ವರ್ಷದಲ್ಲಿ 22 ಸಾವಿರ ಸೈಬರ್ ಪ್ರಕರಣಗಳು ರಾಜ್ಯದಲ್ಲಿ ದಾಖಲಾಗಿವೆ. ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಜನ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಲೇ ಇದ್ದರೂ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ ಎಂದು ವಿಷಾದಿಸಿದರು.

ಲೈಂಗಿಕ ದೌರ್ಜನ್ಯ ಕೊಲೆ, ಪೋಕ್ಸೊ ಕೇಸ್ ಪ್ರಕರಣಗಳು ಕಡಿಮೆಯಾಗುತ್ತಿವೆ. ಆದರೆ ಸೈಬರ್ ಅಪರಾಧ ತಗ್ಗಿಲ್ಲ. ಇದಕ್ಕೆ ಕೇಂದ್ರ ಸರ್ಕಾರ ನೂತನ ಕಾಯ್ದೆಯನ್ನು ಮಾಡುವ ಅಗತ್ಯವಿದೆ ಎಂದರು.

ಬಿಜೆಪಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಅವರ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವ ಡಾ. ಜಿ. ಪರಮೇಶ್ವರ್, ಜೈಲಿನೊಳಗಿನ ಅಪರಾಧ ಹಾಗೂ ಅಕ್ರಮಗಳ ತಡೆಗಟ್ಟಲು ಕಟ್ಟು ನಿಟ್ಟಿನ ಕ್ರಮ ವಹಿಸಿದ್ದೇವೆ. ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಜೈಲಿನಲ್ಲಿ ನಡೆಯುತ್ತಿರುವ ಆಕ್ರಮಗಳಿಗೆ ಕಡಿವಾಣ ಹಾಕಲಾಗಿದೆ. ಜೊತೆಗೆ ಜಾಮರ್ ಗಳನ್ನು ಅಳವಡಿಕೆ ಮಾಡಿ ಅಪರಾಧಿಗಳ ನಡುವಿನ ಸಂವಹನಕ್ಕೆ ನಿಯಂತ್ರಣ ಹೇರಲಾಗಿದೆ ಎಂದು ತಿಳಿಸಿದರು.

*****************

ರಾಜ್ಯ ಬಜೆಟ್ ಮೇಲಿನ ಚರ್ಚೆಯಲ್ಲಿ ಪ್ರತಿಪಕ್ಷ ನಾಯಕರು ಮಾತನಾಡುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ, ಸರ್ಕಾರದ ಆರ್ಥಿಕ ಮುಖ್ಯ ಕಾರ್ಯದರ್ಶಿ, ಪ್ರಮುಖ ಸಚಿವರು ಸದನದಲ್ಲಿ ಇಲ್ಲ ಎಂದು ವಿಪಕ್ಷ ಸದ್ಯಸರು ವಿಧಾನಸಭೆಯಲ್ಲಿಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಶೂನ್ಯ ವೇಳೆಯ ನಂತರ ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಲು ಮುಂದಾದರು. ಈ ವೇಳೆ ಮಧ್ಯ ಪ್ರವೇಶಿಸಿದ ಬಿಜೆಪಿ ಸದಸ್ಯರಾದ ಅರಗ ಜ್ಞಾನೇಂದ್ರ, ಡಾ.ಸಿ.ಎನ್.ಅಶ್ವಥ್ ನಾರಾಯಣ ಸೇರಿದಂತೆ ಪ್ರಮುಖರು ಮುಖ್ಯಮಂತ್ರಿಗಳು, ಹಣಕಾಸು ಪ್ರಧಾನ ಕಾರ್ಯದರ್ಶಿ ಎಲ್ಲಿ ಎಂದು ಸರ್ಕಾರವನ್ನು ಪ್ರಶ್ನಿಸಿದರು.

ಈ ವೇಳೆ ಪೀಠದಲ್ಲಿದ್ದ ಉಪ ಸಭಾಪತಿ ರುದ್ರಪ್ಪ ಲಮಾಣಿ, ಮುಖ್ಯಮಂತ್ರಿ ಅವರಿಗೆ ಆರೋಗ್ಯ ಸರಿಯಿಲ್ಲ. ನಾಳೆ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಉತ್ತರ ನೀಡಲಿದ್ದಾರೆ. ಹಾಗಾಗಿ, ಮಾತು ಮುಂದುವರೆಸಿ ಎಂದರು.

ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಸದಸ್ಯರು, ವಿರೋಧ ಪಕ್ಷದ ನಾಯಕರು ಮಾತನಾಡುವಾಗ ಮುಖ್ಯಮಂತ್ರಿ, ಪ್ರಮುಖ ಸಚಿವರು ಇರಲೇ ಬೇಕು. ಆದರೆ, ಇಂದು ಅಗೌರವ ತೋರಲಾಗಿದೆ. ಹಾಗಾಗಿ, ವಿಪಕ್ಷ ನಾಯಕರು ಮಾತು ನಿಲ್ಲಿಸಿ, ಸದನ ಬಹಿಷ್ಕಾರ ಮಾಡೋಣ ಎಂದರು.

ಈ ವೇಳೆ ಸಚಿವ ಕೆ.ಜೆ.ಜಾರ್ಜ್ ಮಾತನಾಡಿ, ಪ್ರತಿಪಕ್ಷ ನಾಯಕರು ಹೇಳುವ ಪ್ರತಿಯೊಂದು ಮಾತುಗಳನ್ನು ಖುದ್ದು ನಾನೇ ಬರೆದುಕೊಳ್ಳುತ್ತಿದ್ದೇನೆ. ಆನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉತ್ತರ ಕೊಡಿಸಲಾಗುವುದು ಎಂದರು. ಇದಕ್ಕೂ ಒಪ್ಪದ ಬಿಜೆಪಿ ಸದಸ್ಯರು, ಏನೇ ಆಗಲಿ ಯಾರೋ ಇಬ್ಬರು ಇಲ್ಲಿ ಇರಲೇ ಬೇಕಿತ್ತು. ಇಲ್ಲವೆಂದರೆ, ನಾವು ಹೇಳುವ ಅಂಶಗಳು ಸರ್ಕಾರಕ್ಕೆ ಹೇಗೆ ತಲುಪುತ್ತದೆ ಎಂದು ಕೇಳಿದರು. ಆಗ ಸಭಾಧ್ಯಕ್ಷ ಯು.ಟಿ.ಖಾದರ್, ಮುಖ್ಯಮಂತ್ರಿ

ಹಾಜರಾಗುತ್ತಿದ್ದಾರೆ ಎಂದು ವಿಷಯ ತಿಳಿಗೊಳಿಸಿದರು. ನಂತರ ಸಿದ್ದರಾಮಯ್ಯ ಅವರು ಸದನಕ್ಕೆ ಹಾಜರಾದ ನಂತರವೂ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾದ ಪ್ರತಿವಾದ ನಡೆಯಿತು. ಬಳಿಕ ಗದ್ದಲ ಶಮನಗೊಂಡಿತು.

ಬಜೆಟ್ ಮೇಲಿನ ಚರ್ಚೆ ಮುಂದುವರೆಸಿದ ಆರ್. ಅಶೋಕ, ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಅಭಿವೃದ್ಧಿ ಚಟುವಟಿಕೆ ಸ್ಥಗಿತಗೊಂಡಿದೆ. ಸರ್ಕಾರ ಸಾಲದ ಸುಳಿಗೆ ಸಿಲುಕಿದ್ದು, ಹಿಂದೆಂದೂ ಇಲ್ಲದಷ್ಟು ಸಾಲದ ಹೊರೆ ರಾಜ್ಯದ ಜನರ ಮೇಲೆ ಬಿದ್ದಿದೆ. ಅಭಿವೃದ್ಧಿ ಚಟುವಟಿಕೆಗೆ ಹಣ ಇಲ್ಲದಂತಾಗಿದೆ. ಅಭಿವೃದ್ಧಿ ಶೂನ್ಯವಾಗಿದೆ ಎಂದು ಟೀಕಿಸಿದರು.

*****************

ರಾಜ್ಯದ ವಿವಿಧ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ 7 ಸರ್ಕಾರಿ ಪ್ರೌಢಶಾಲೆಗಳನ್ನು ಉನ್ನತೀಕರಿಸಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯಿದೆ ಎಂದು  ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ವಿಧಾನಸಭೆಗಿಂದು ತಿಳಿಸಿದರು.

ಪ್ರಶೋತ್ತರ ವೇಳೆಯಲ್ಲಿ ಶಾಸಕ ವಿಶ್ವಾಸ್ ವಸಂತ ವೈದ್ಯ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಾಲಾ ಶಿಕ್ಷಣ ಇಲಾಖೆ ನಿರ್ದೇಶಕರು ಕಳೆದ ಡಿಸೆಂಬರ್ 9 ರಂದು ಈ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಆರ್ಥಿಕ ಇಲಾಖೆ ಅನುಮತಿ ದೊರೆತ ಕೂಡಲೇ ನಿಯಮಾನುಸಾರ ಕ್ರಮ ವಹಿಸುವುದಾಗಿ ಹೇಳಿದರು.

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಮೊದ್ದೂರು ಸರ್ಕಾರಿ ಪ್ರೌಢಶಾಲೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯೂ ಇದೆ. ಬಜೆಟ್‌ನಲ್ಲಿ ಘೋಷಿಸಿರುವಂತೆ ಹೊಸದಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವುದಾಗಿ ಸಚಿವರು ತಿಳಿಸಿದರು.

*****************

ರಾಜ್ಯದ ಜನರಿಗೆ ಉತ್ತಮ ವೈದ್ಯಕೀಯ ಸೇವೆ ಒದಗಿಸುವ ನಿಟ್ಟಿನಲ್ಲಿ 1 ಸಾವಿರದ 32 ಔಷಧಿಗಳನ್ನು ಖರೀದಿಸಿ ಉಚಿತವಾಗಿ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರದ ಅವಧಿಯಲ್ಲಿ ಬಿಜೆಪಿಯ ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರ ಪ್ರಸ್ತಾಪಸಕ್ಕೆ ಉತ್ತರಸಿದ ಸಚಿವರು, ಆರೋಗ್ಯ ಇಲಾಖೆಯಲ್ಲಿ ಜೀವನಾವಶ್ಯಕ ಮತ್ತು ಅಪಕ್ಷೇಣೀಯ ಎಂಬ 2 ವಿಧಗಳಲ್ಲಿ ಔಷಧಿಗಳನ್ನು ಖರೀದಿಸಲಾಗುತ್ತಿದೆ. ಜೀವನಾವಶ್ಯಕವಾದ 408 ಮಾದರಿಯ ಔಷಧಿಗಳ ಪೈಕಿ 262 ಖರೀದಿಗೆ ಅಪೇಕ್ಷಣೀಯ, 324 ಔಷಧಿಗಳ ಪೈಕಿ 213 ಔಷಧಿಗಳ ಖರೀದಿಗೆ ಅನುಮತಿ ನೀಡಲಾಗಿದ್ದು, ಒಟ್ಟು 475 ಔಷಧಿಗಳನ್ನು ಖರೀದಿಸಲಾಗುತ್ತಿದೆ. ಜಿಲ್ಲಾಮಟ್ಟದಲ್ಲಿ 344 ಔಷಧಿಗಳ ದಾಸ್ತಾನಿದೆ ಎಂದು ವಿವರಿಸಿದರು.

*****************

ಅಕ್ರಮ ಚಿನ್ನ ಸಾಗಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷ ಆರೋಪಿಗಳ ರಕ್ಷಣೆಗೆ ಮುಂದಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ರನಟಿ ರನ್ಯಾ ರಾವ್ ಅಕ್ರಮ ಚಿನ್ನ ಸಾಗಾಟ ಪ್ರಕರಣದಲ್ಲಿ ಭಾಗಿಯಾಗಿದ್ದು, ಅವರ ಹಿಂದೆ ಯಾರು ಇದ್ದಾರೆ ಎಂಬ ಬಗ್ಗೆ ಸಮಗ್ರ ತನಿಖೆ ನಡೆಯಬೇಕು. ತಪ್ಪಿತಸ್ತರನ್ನು ಶಿಕ್ಷಿಸಬೇಕು, ರಕ್ಷಿಸಬಾರದು ಎಂದರು.

ಧ್ವನಿ: ಪ್ರಲ್ಹಾದ್ ಜೋಶಿ  30 ಸೆಕೆಂಡ್‌ಗಳು

*****************

ವಿಶ್ವ ಆಡಿಯೋ ದೃಶ್ಯ ಮತ್ತು ಮನರಂಜನಾ ಶೃಂಗಸಭೆ ನವದೆಹಲಿಯಲ್ಲಿ ನಡೆಯುತ್ತಿದೆ. 100ಕ್ಕೂ ಹೆಚ್ಚು ರಾಯಭಾರಿಗಳು, ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಡಾ.ಎಸ್.ಜೈಶಂಕರ್, ಡಾ.ಎಲ್.ಮುರುಗನ್, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಮತ್ತಿತರರು ಭಾಗಿಯಾಗಿದ್ದಾರೆ.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಮಾತನಾಡಿ, ವೇವ್ಸ್ ಅತ್ಯಂತ ಪ್ರಮುಖ ವೇದಿಕೆಯಾಗಿದ್ದು, ಇದು ನಾವೀನ್ಯತೆಯ ಪ್ರತೀಕವಾಗಿದೆ. ತಂತ್ರಜ್ಞಾನದಲ್ಲಿ ವ್ಯಾಪಕ ಬದಲಾವಣೆಯಾಗುತ್ತಿದ್ದು, ಸ್ಮಾರ್ಟ್‌ಫೋನ್ ಬಳಕೆ ಹೆಚ್ಚಾಗುತ್ತಿದೆ. ಅಂತರ್ಜಾಲ ಸೇವೆಯು ವಿಸ್ತರಿಸುತ್ತಿದೆ. ಮನೋರಂಜನಾ ಕ್ಷೇತ್ರದಲ್ಲಿ ಭಾರತ ಮಹತ್ವದ ಸಾಧನೆ ಮಾಡುತ್ತಿದೆ. ಹಾಲಿವುಡ್ ಚಿತ್ರ ಲಯನ್ ಕಿಂಗ್ ಚಿತ್ರದ ಶೇಕಡ 70 ರಷ್ಟು ಚಿತ್ರೀಕರಣ ಭಾರತದಲ್ಲಿ ನಡೆದಿರುವುದು ವಿಶೇಷ. ಇದೇ ರೀತಿ ಭಾರತ ಮನೋರಂಜನಾ ಕ್ಷೇತ್ರದಲ್ಲಿ ದಾಪುಗಾಲಿಡುತ್ತಿದೆ ಎಂದರು.

*****************

ರಾಜ್ಯ ಸಚಿವ ಸಂಪುಟ ಸಭೆ ನಾಳೆ ನಡೆಯಲಿದೆ. 6 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ ವಿಧಾನಮಂಡಲ ಅಧಿವೇಶನದಲ್ಲಿ ಹಲವು ಮಸೂದೆಗಳ ಮಂಡನೆಗೆ ಅನುಮೋದನೆ ನೀಡುವುದು ಸೇರಿದಂತೆ ಆಡಳಿತಕ್ಕೆ ಸಂಬಂಧಿಸಿದ ಪ್ರಸ್ತಾವನೆಗಳಿಗೆ ಅಂಗೀಕಾರ ನೀಡುವ ಸಾಧ್ಯತೆಯಿದೆ.

*****************

ಶಿವಮೊಗ್ಗದಲ್ಲಿ 26ನೇ ರಾಜ್ಯಮಟ್ಟದ ಅಂತರ್ ಮಹಾ ವಿಶ್ವವಿದ್ಯಾಲಯಗಳ ಅಥ್ಲೆಟಿಕ್ಸ್ ಕ್ರೀಡಾಕೂಟ ಇದೇ 15 ರಿಂದ 18ರವರೆಗೆ ನಡೆಯಲಿದೆ.

ಶಿವಮೊಗ್ಗದಲ್ಲಿ ಮಾತನಾಡಿದ ಎನ್‌ಇಎಸ್ ಅಧ್ಯಕ್ಷ ಜಿ.ನಾರಾಯಣರಾವ್, ಕ್ರೀಡಾಕೂಟವನ್ನು ವಿಟಿಯು ಕುಲಪತಿ ಡಾ.ವಿದ್ಯಾಶಂಕರ್ ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ ಎಂದರು.

ಧ್ವನಿ: ಜಿ.ನಾರಾಯಣರಾವ್ 30 ಸೆಕೆಂಡ್‌ಗಳು

*****************

ನಂದಿನ ಹಾಲಿನ ದರ ಏರಿಕೆಗೆ ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ ವಿರೋಧ ವ್ಯಕ್ತಪಡಿಸಿದೆ.

ಸಂಘದ ಅಧ್ಯಕ್ಷ ಜಿ.ಕೆ. ಶೆಟ್ಟಿ, ಈ ಕುರಿತು ಕೆಎಂಎಫ್ ಗೆ ಪತ್ರ ಬರೆದಿದ್ದು, ದರ ಹೆಚ್ಚಳ ಮಾಡಿದರೆ ಹೋಟೆಲ್ ಉದ್ಯಮದ ಮೇಲೆ ದೊಡ್ಡ ಮಟ್ಟದ ನಕಾರಾತ್ಮಕ ಪರಿಣಾಮ ಬೀರಲಿದೆ ಎಂಬ ಕಳವಳ ವ್ಯಕ್ತಪಡಿಸಿದ್ದಾರೆ.

*****************

ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿ ಕಾಲ್ತುಳಿತದಿಂದ ನಿಧನರಾದ ಬೆಳಗಾವಿಯ ನಾಲ್ವರಿಗೆ ಉತ್ತರ ಪ್ರದೇಶ ಸರ್ಕಾರ ತಲಾ 25 ಲಕ್ಷ ರೂಪಾಯಿ ಪರಿಹಾರ ಬಿಡುಗಡೆ ಮಾಡಿದೆ. ಮೃತಪಟ್ಟ ಕುಟುಂಬದ ಅವಲಂಬಿತರಿಗೆ ಉತ್ತರ ಪ್ರದೇಶ ಸರ್ಕಾರ ಹಣವನ್ನು ವರ್ಗಾಯಿಸಿದೆ.

ಜನವರಿ 29 ರಂದು ಮೌನಿ ಅಮವಾಸ್ಯೆ ಪ್ರಯುಕ್ತ ಪುಣ್ಯಸ್ನಾನದ ವೇಳೆ ಕಾಲ್ತುಳಿತ ಸಂಭವಿಸಿದ್ದು, ಈ ದುರಂತದಲ್ಲಿ ನಾಲ್ವರು ಮೃತಪಟ್ಟಿದ್ದರು.

*********ಮುಕ್ತಾಯ********